# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 08.03.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು | ಸದಸ್ಯರು | ಹಾಜರಿದ್ದರು |
| 3 | ದಿವ್ಯಾ | ಕೋವಿಡ್ ನೋಡಲ್ ಅಧಿಕಾರಿ | ಸದಸ್ಯರು | ಹಾಜರಿದ್ದರು |
| 4 | ಡಾ॥ ಸುನೀತಾ | ವೈದ್ಯಾಧಿಕಾರಿಗಳು | ಪ್ರಾ. ಆ. ಕೇಂ. | ಹಾಜರಿದ್ದರು |
| 5 | ಡಾ॥ ಹರ್ಷಿತ್ | ಕೋವಿಡ್ ವೈದ್ಯಾಧಿಕಾರಿಗಳು | ಪ್ರಾ. ಆ. ಕೇಂ. | ಹಾಜರಿದ್ದರು |
| 6 | ಶ್ರೀಮತಿ ಸುಜಾತಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 7 | ಶ್ರೀ ಗೋವಿಂದರಾಜು | ಕಂದಾಯ ವಸೂಲಿಗಾರರು | ಸದಸ್ಯರು | ಹಾಜರಿದ್ದರು |
| 8 | ಮೊಹಮ್ಮದ್ ಘಿಯಾಸುದ್ದೀನ್ | ಕೆಲಸ ಪರಿವೀಕ್ಷಕರು, ಬಿಡಬ್ಲ್ಯೂಎಸ್ಎಸ್‌ಬಿ | ಸದಸ್ಯರು | ಹಾಜರಿದ್ದರು |
| 9 | ತಿರುಪಾಲ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 10 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 11 | ಗೌತಮ್ ರಾಜ್ | ಮಾರ್ಷಲ್ | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

1) ಆರೋಗ್ಯ ಇಲಾಖೆ:-

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೋವಿಡ್ ವ್ಯಾಕ್ಸಿನ್ ನೀಡಲು ಪ್ರಾರಂಭಿಸಲಾಗಿದ್ದು, ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳಾದ ಸುನೀತಾರವರು ಮಾತನಾಡಿ ಸೋಮವಾರ, ಬುಧವಾರ, ಶುಕ್ರವಾರ ಹಾಗೂ ಶನಿವಾರದಂದು ಸಾರ್ವಜನಿಕರಿಗೆ ಲಸಿಕೆಯನ್ನು ನೀಡಲು ವ್ಯವಸ್ಥೆಯನ್ನು ಮಾಡಿರಲಾಗಿರುತ್ತದೆ. 2ನೇ ಡೋಸ್ ಲಸಿಕೆ ನೀಡುವುದು ಕೂಡ ಪ್ರಾರಂಭವಾಗಿದ್ದು, 1ನೇ ಡೋಸ್ ಲಸಿಕೆ ಹಾಕಿಸಿಕೊಂಡಿರುವ ಪಾಲಿಕೆ ಸಿಬ್ಬಂದಿಗಳಾದ ಪಿಕೆಗಳು, ಮೇಲ್ವಿಚಾರಕರು 2ನೇ ಡೋಸ್ ಲಸಿಕೆ ಹಾಕಿಸಿಕೊಳ್ಳಲು ಸಭೆಯಲ್ಲಿ ವೈದ್ಯಾಧಿಕಾರಿಗಳು ಹೇಳಿದರು. ಉಳಿದಂತೆ, ಲಸಿಕೆ ಹಾಕಿಸಿಕೊಳ್ಳದೇ ಇರುವ ಅಧಿಕಾರಿಗಳು ತಮ್ಮ ಇಲಾಖೆಯ ಸಿಬ್ಬಂದಿ ಪಟ್ಟಿಯನ್ನು ನೀಡಿ ಲಸಿಕೆಯನ್ನು ಹಾಕಿಸಿಕೊಳ್ಳಲು ವೈದ್ಯಾಧಿಕಾರಿಗಳು ಸಂಬಂಧಪಟ್ಟ ಇಲಾಖೆಯವರಿಗೆ ತಿಳಿಸಲು ಮಾನ್ಯ ಅಧ್ಯಕ್ಷರಲ್ಲಿ ಕೋರಿದರು.

ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆಸ್ಪತ್ರೆ ವತಿಯಿಂದ ಎಸ್‌ಓಆರ್‌ಸಿ ಕ್ಯಾಂಪ್ ಹಮ್ಮಿಕೊಳ್ಳಲಾಗಿರುತ್ತದೆ. ಅದರಂತೆ ಕ್ಯಾಂಪ್ ಮಾಡುವುದಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರಲ್ಲಿ ಆರ್ಥಿಕ ಕೊರತೆ ಇರುವುದರಿಂದ ಕ್ಯಾಂಪ್ ಮುಂದುವರೆಸಲು ಆರ್ಥಿಕ ತೊಡಕಾಗಿದೆ ಎಂದು ವೈದ್ಯಾಧಿಕಾರಿಗಳು ಸಭೆಗೆ ತಿಳಿಸಿದರು. ಅದರಂತೆ, ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗೆ ಮಾಹಿತಿ ತಿಳಿಸುವುದಾಗಿ ಭರವಸೆ ನೀಡಿದರು.

ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಓಆರ್‌ಎಸ್ ಹಾಗೂ ರಕ್ತದೊತ್ತಡದ ಔಷಧಿಯ ಕೊರತೆಯಿದ್ದು, ಸುಮಾರು ತಿಂಗಳಾದರೂ ಔಷಧಿಯನ್ನು ಪೂರೈಸಲು ಆರೋಗ್ಯ ಇಲಾಖೆ ಗಮನ ಕೊಡದೇ ಇರುವುದು ಕಂಡುಬಂದಿದ್ದು, ಕ್ರಮವಹಿಸಲು ಸೂಚಿಸಲಾಯಿತು.

2) ಪೌರ ಕಾರ್ಮಿಕರ ಬಗ್ಗೆ:

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಐದು ಮಂದಿ ಪೌರ ಕಾರ್ಮಿಕರ ವೇತನ ಪಾವತಿಯಾಗಿರುವುದಿಲ್ಲ ಎಂದು ಮೇಲ್ವಿಚಾರಕರು ಸಭೆಗೆ ತಿಳಿಸಿದರು. ಹಾಗೂ ಪೌರ ಕಾರ್ಮಿಕರು ಕಸ ಸಂಗ್ರಹಿಸುವ ಕಸದ ಗಾಡಿಗಳು ಹಾಳಾಗಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು. ಅದರಂತೆ, ನೋಡಲ್ ಅಧಿಕಾರಿಗಳು ಮಾತನಾಡಿ, ೮೦ ಕಸದ ಗಾಡಿಗಳನ್ನು ಯಶವಂತಪುರ ವಾರ್ಡಿನ ವ್ಯಾಪ್ತಿಗೆ ಮಂಜೂರು ಮಾಡಲು ಟಿಪ್ಪಣಿಯನ್ನು ಸಿದ್ಧಪಡಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲು ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷರಿಗೆ ಸೂಚಿಸಿದರು.

3) ಬೀದಿ ಬದಿ ವ್ಯಾಪಾರಿಗಳ ತೆರವುಗೊಳಿಸುವ ಬಗ್ಗೆ:-

ಯಶವಂತಪುರ 1ನೇ ಮುಖ್ಯರಸ್ತೆ ಹಾಗೂ ಬಜಾರ್ ಸ್ಟ್ರೀಟ್ ರೋಡಲ್ಲಿ ಬೀದಿ ಬದಿ ವ್ಯಾಪಾರಿಗಳು ರಸ್ತೆ ಬದಿಯಲ್ಲಿ ತಮ್ಮ ತಳ್ಳುವ ಗಾಡಿಗಳನ್ನು ಇಟ್ಟು ವ್ಯಾಪಾರವನ್ನು ಮಾಡುತ್ತಿರುವುದರಿಂದ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಕೂಡಲೇ ವ್ಯಾಪಾರಿಗಳನ್ನು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಮಾರ್ಷಲ್, ಮೇಲ್ವಿಚಾರಕರು ಹಾಗೂ ಗ್ಯಾಂಗ್‌ಮ್ಯಾನ್‌ಗಳಿಗೆ ತಿಳಿಸಿದರು.

4) ಕಂದಾಯ ಇಲಾಖೆ:

ಕಂದಾಯ ವಸೂಲಿಗಾರರು ಮಾತನಾಡಿ, ವಾರ್ಡ್‌ನಲ್ಲಿ ಒಟ್ಟು 86.75 ಲಕ್ಷಗಳ ಕಂದಾಯವು ಬಾಕಿ ಇರುವುದಾಗಿ ಸಭೆಗೆ ತಿಳಿಸಿದರು, ಈ ವಾರ ಯಶವಂತಪುರ ವಾರ್ಡ್ ವ್ಯಾಪ್ತಿಯಲ್ಲಿ ಮೂರು ಲಕ್ಷಗಳ ಕಂದಾಯವು ವಸೂಲಿ ಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸದರು.

5) ಬೆಸ್ಕಾಂ:-

ವಾರ್ಡ್‌ನ ವಿವಿಧೆಡೆ ಸಾರ್ವಜನಿಕ ಬೋರ್‌ವೆಲ್, ಶುದ್ಧ ಕುಡಿಯುವ ನೀರಿನ ಘಟಕ, ಸಮುದಾಯ ಭವನ, ಬಿಬಿಎಂಪಿ ಆಸ್ಪತ್ರೆಗಳಲ್ಲಿ ವಿದ್ಯುತ್ ಮೀಟರ್‌ಗಳನ್ನು ಅಳವಡಿಸಲಾಗಿದ್ದು, ಇದರ ಬಿಲ್ಲಿನ ಮೊತ್ತದ ಕಡತವನ್ನು ಕೂಡಲೇ ಸಿದ್ಧಪಡಿಸಿ, ಸಂಬಂಧಪಟ್ಟ ಗುತ್ತಿಗೆದಾರರು ಅತೀ ಜರೂರಾಗಿ ಸಹಾಯಕ ಅಭಿಯಂತರರಿಗೆ ನೀಡಲು ಸಭೆಯಲ್ಲಿ ತಿಳಿಸಿದರು.

6) ಬಿಡಬ್ಲ್ಯೂಎಸ್‌ಎಸ್‌ಬಿ :

ವಾರ್ಡ್ ವ್ಯಾಪ್ತಿಯಲ್ಲಿ ಸ್ಯಾನಿಟರಿ ಪೈಪ್ ರಿಪೇರಿ ಕಾರ್ಯ ಮಾಡುವಾಗ ರಸ್ತೆ ಅಗೆತ ಮಾಡುತ್ತಿರುವುದು ಕಂಡುಬಂದಿರುತ್ತದೆ. ಬಿಡಬ್ಲ್ಯೂಎಸ್‌ಎಸ್‌ಬಿ ಕೆಲಸಗಾರರು ರಸ್ತೆ ಅಗೆತಕ್ಕೆ ಬಿಬಿಎಂಪಿಯ ಅನುಮತಿ ಪತ್ರವು ಇಲ್ಲದಿದ್ದರೂ ರಸ್ತೆ ಅಗೆತವನ್ನು ಸ್ವತ: ಬಿಡಬ್ಲ್ಯೂಎಸ್‌ಎಸ್‌ಬಿ ಕೆಲಸಗಾರರೇ ಮಾಡಿ ಪಾಲಿಕೆಯ ರಸ್ತೆಗಳನ್ನು ಹಾಳು ಮಾಡುತ್ತಿರುವುದು ಕಂಡುಬಂದಿರುತ್ತದೆ. ಅದರಂತೆ, ಸಭೆಗೆ ಹಾಜರಿದ್ದ ಪರಿವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಅನುಮತಿ ಪತ್ರವಿಲ್ಲದೇ ಯಾವುದೇ ರಸ್ತೆ ಅಗೆತವನ್ನು ಮಾಡದಿರುವುದಾಗಿ ಸೂಚಿಸಿದರು. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಸಾರ್ವಜನಿಕ ದೂರುಗಳು ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆಗೆ ಬರುತ್ತಿರುವುದು ಅಧ್ಯಕ್ಷರ ಗಮನಕ್ಕೆ ಬಂದಿರುತ್ತದೆ. ಅದರಂತೆ ದೂರುಗಳನ್ನು ಅತೀ ಜರೂರಾಗಿ ಪೂರ್ಣಗೊಳಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಜಿ. ಉಮೇಶ್)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:37